# ಕರ್ನಾಟಕ ವಿಧಾನ ಪರಿಷತ್ತು

| | | |
|---|---|---|
| **ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ** | : | 730 |
| **ಸದಸ್ಯರ ಹೆಸರು** | : | ಶ್ರೀಮತಿ ಬಲ್ಕೀಸ್ ಬಾನು (ವಿಧಾನಸಭೆಯಿಂದ ಚುನಾಯಿತರಾದವರು) |
| **ಉತ್ತರಿಸುವ ದಿನಾಂಕ** | : | 12.12.2025. |
| **ಉತ್ತರಿಸುವವರು** | : | ಮಾನ್ಯ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಹಾಗೂ ವಿಕಲಚೇತನರ ಮತ್ತು ಹಿರಿಯ ನಾಗರಿಕರ ಸಬಲೀಕರಣ ಇಲಾಖಾ ಸಚಿವರು |

| ಕ್ರ ಸಂ. | ಪ್ರಶ್ನೆ | ಉತ್ತರ |
|---|---|---|
| ಅ) | ಶಿವಮೊಗ್ಗ ಜಿಲ್ಲೆಯಲ್ಲಿ ಎಷ್ಟು ಅಂಗನವಾಡಿ ಕೇಂದ್ರಗಳು ಸ್ವಂತ ಕಟ್ಟಡ ಹೊಂದಿವೆ ಮತ್ತು ಎಷ್ಟು ಕೇಂದ್ರಗಳು ಬಾಡಿಗೆ ಕಟ್ಟಡದಲ್ಲಿ ನಡೆಯುತ್ತಿವೆ; ಬಾಡಿಗೆ ಕಟ್ಟಡದಲ್ಲಿ ನಡೆಯುತ್ತಿರುವ ಕೇಂದ್ರಗಳಿಗೆ ಪ್ರತಿ ತಿಂಗಳು ನೀಡುವ ಬಾಡಿಗೆ ಹಣದ ಮೊತ್ತವೆಷ್ಟು; (ತಾಲ್ಲೂಕುವಾರು ಮಾಹಿತಿ ನೀಡುವುದು) | ಶಿವಮೊಗ್ಗ ಜಿಲ್ಲೆಯಲ್ಲಿ 2062 ಅಂಗನವಾಡಿ ಕೇಂದ್ರಗಳು ಸ್ವಂತ ಕಟ್ಟಡ ಮತ್ತು 295 ಅಂಗನವಾಡಿ ಕೇಂದ್ರಗಳು ಬಾಡಿಗೆ ಕಟ್ಟಡ ಹೊಂದಿವೆ. ಗ್ರಾಮೀಣ ಭಾಗದ ಬಾಡಿಗೆ ಕಟ್ಟಡದಲ್ಲಿ ನಡೆಯುವ ಕೇಂದ್ರಗಳಿಗೆ ಪ್ರತಿ ತಿಂಗಳು 2000/- ಹಾಗೂ ನಗರ ಪ್ರದೇಶದ ಬಾಡಿಗೆ ಕಟ್ಟಡದಲ್ಲಿ ನಡೆಯುತ್ತಿರುವ ಕೇಂದ್ರಗಳಿಗೆ 6000/- ರೂ ಬಾಡಿಗೆ ಹಣ ನೀಡಲಾಗುತ್ತಿದೆ. (ತಾಲ್ಲೂಕುವಾರು ಮಾಹಿತಿನ್ನು **ಅನುಬಂಧದಲ್ಲಿ** ಒದಗಿಸಿದೆ) |
| ಆ) | ಅಂಗನವಾಡಿ ಕೇಂದ್ರಗಳಲ್ಲಿನ ಮಕ್ಕಳ ಮತ್ತು ಸಿಬ್ಬಂದಿಯ ಸಂಖ್ಯೆ ಎಷ್ಟು; | ಶಿವಮೊಗ್ಗ ಜಿಲ್ಲೆಯ ಅಂಗನವಾಡಿ ಕೇಂದ್ರಗಳಲ್ಲಿನ ಮಕ್ಕಳ ಮತ್ತು ಸಿಬ್ಬಂದಿಯ ಸಂಖ್ಯೆ ಈ ಕೆಳಕಂಡಂತಿದೆ.<br><br>ಕ್ರ.ಸಂ — ಸಂಖ್ಯೆ<br>6 ತಿಂಗಳಿಂದ 3 ವರ್ಷದ ಮಕ್ಕಳ ಸಂಖ್ಯೆ — 16545<br>3 ರಿಂದ 6 ವರ್ಷದ ಮಕ್ಕಳ ಸಂಖ್ಯೆ — 30860<br>ಅಂಗನವಾಡಿ ಕಾರ್ಯಕರ್ತೆಯರ ಸಂಖ್ಯೆ — 2449<br>ಅಂಗನವಾಡಿ ಸಹಾಯಕಿರ ಸಂಖ್ಯೆ — 2072 |
| ಇ) | ಅನೇಕ ಕೇಂದ್ರಗಳಲ್ಲಿ ಕಳಪೆ ಪೌಷ್ಟಿಕ ಆಹಾರ ಸರಬರಾಜು ಆಗುತ್ತಿರುವ ಬಗ್ಗೆ ಮಾಧ್ಯಮಗಳಲ್ಲಿ ಪ್ರಸಾರವಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಬಂದಿದ್ದಲ್ಲಿ, ಈ ಬಗ್ಗೆ ಸರ್ಕಾರ ಕೈಗೊಂಡ ಕ್ರಮವೇನು? | ಶಿವಮೊಗ್ಗ ಜಿಲ್ಲೆಯ ಅಂಗನವಾಡಿ ಕೇಂದ್ರಗಳಿಗೆ ಕಳಪೆ ಪೌಷ್ಟಿಕ ಆಹಾರ ಸರಬರಾಜು ಆಗುತ್ತಿರುವ ಬಗ್ಗೆ ಯಾವುದೇ ಮಾಧ್ಯಮಗಳಲ್ಲಿ ಪ್ರಸಾರವಾಗಿರುವುದಿಲ್ಲ.<br><br>ಅಂಗನವಾಡಿ ಕೇಂದ್ರಗಳಿಗೆ ಪೂರಕ ಪೌಷ್ಟಿಕ ಆಹಾರ ವಿತರಿಸುವ ಮುನ್ನ ಆಹಾರ ಪದಾರ್ಥಗಳನ್ನು ರಾಸಾಯನಿಕ ವಿಶ್ಲೇಷಣೆಗೆ ಒಳಪಡಿಸಿ, ಅವು ಸೇವನೆಗೆ ಯೋಗ್ಯ ಎಂದು ವರದಿ ಬಂದ ನಂತರವೇ ಅಂಗನವಾಡಿ ಕೇಂದ್ರಗಳಿಗೆ ಸರಬರಾಜು ಮಾಡಲಾಗುತ್ತಿದೆ. ಕೇಂದ್ರ ಸರ್ಕಾರ ನಿಗದಿಪಡಿಸಿದ ಘಟಕ ವೆಚ್ಚ ಹಾಗೂ ಮಾರ್ಗಸೂಚಿಯಂತೆ ಕ್ಯಾಲೋರಿಗಳು, ಮೈಕ್ರೋ ನ್ಯೂಟ್ರಿಯೆಂಟ್ಸ್ ಮತ್ತು ಪ್ರೋಟೀನ್‌ಗಳನ್ನು ಒಳಗೊಂಡ ಉತ್ತಮ |

2

| | | |
|---|---|---|
| | | ಗುಣಮಟ್ಟದ ಆಹಾರ ಪದಾರ್ಥಗಳನ್ನು ಎಂ.ಎಸ್.ಪಿ.ಸಿ.ಗಳಿಂದ ಅಂಗನವಾಡಿಗಳಿಗೆ ಸರಬರಾಜು ಮಾಡಲಾಗುತ್ತಿದೆ.<br><br>ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆಯ FSSAI ಪ್ರಯೋಗಾಲಯಗಳಲ್ಲಿ 2024-25ನೇ ಸಾಲಿನಲ್ಲಿ 1,329 ಮಾದರಿಗಳನ್ನು ಮತ್ತು 2025-26ನೇ ಸಾಲಿನಲ್ಲಿ ಈವರೆವಿಗೆ 674 ಪೂರಕ ಪೌಷ್ಟಿಕ ಆಹಾರದ ಮಾದರಿಗಳನ್ನು ಅಂಗನವಾಡಿ ಕೇಂದ್ರಗಳಿಂದ ಸಂಗ್ರಹಿಸಿ ಪರೀಕ್ಷೆ ನಡೆಸಲಾಗಿದೆ. ಆದರೆ, ಈವರೆಗೆ ಯಾವುದೇ ಪ್ರತಿಕೂಲ ವರದಿ ಸ್ವೀಕೃತವಾಗಿರುವುದಿಲ್ಲ.<br><br>ಅಂಗನವಾಡಿ ಕೇಂದ್ರಗಳಿಗೆ ಎಂ.ಎಸ್.ಪಿ.ಸಿ.ಗಳಿಂದ ಆಹಾರ ಸರಬರಾಜು ಆಗುತ್ತಿದ್ದು, ಯಾವುದೇ ಎಂ.ಎಸ್.ಪಿ.ಸಿ.ಗಳ ವಿರುದ್ಧ ದೂರುಗಳು ಬಂದ ಕೂಡಲೇ, ಅಂತಹ ಎಂ.ಎಸ್.ಪಿ.ಸಿ.ಗಳ ಕಾರ್ಯನಿರ್ವಹಣೆಯನ್ನು ಅಮಾನತ್ತುಗೊಳಿಸಲಾಗುತ್ತದೆ.<br><br>ಸದರಿ ಎಂ.ಎಸ್.ಪಿ.ಸಿ.ಗಳು ತಮ್ಮ ನ್ಯೂನ್ಯತೆಗಳನ್ನು ಅಥವಾ ಲೋಪದೋಷಗಳನ್ನು ಸರಿಪಡಿಸಿಕೊಂಡ ಬಗ್ಗೆ ವಿವರವಾದ ವರದಿಯನ್ನು ಸಲ್ಲಿಸಿದ ನಂತರವೇ, ಅಂಗನವಾಡಿ ಕೇಂದ್ರಗಳಿಗೆ ಆಹಾರ ಪೂರೈಕೆ ಮಾಡಲು ಅನುಮತಿ ನೀಡಲಾಗುತ್ತದೆ. |

**ಸಂಖ್ಯೆ:** ಮಮಇ 340 ಐಸಿಡಿ 2025

**(ಲಕ್ಷ್ಮೀ ಆರ್. ಹೆಬ್ಬಾಳಕರ್)**
ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಹಾಗೂ
ವಿಕಲಚೇತನರ ಮತ್ತು ಹಿರಿಯ ನಾಗರಿಕರ
ಸಬಲೀಕರಣ ಇಲಾಖಾ ಸಚಿವರು

# ಅನುಬಂಧ

| ಕ್ರ.ಸಂ. | ತಾಲ್ಲೂಕು ಹೆಸರು | ಒಟ್ಟು ಕಾರ್ಯ ನಿರ್ವಹಿಸುತ್ತಿರುವ ಅಂಗನವಾಡಿ ಕೇಂದ್ರಗಳ ಸಂಖ್ಯೆ | ಸ್ವಂತ ಕಟ್ಟಡ | ಬಾಡಿಗೆ | ಮಾಸಿಕ ಬಾಡಿಗೆ ಮೊತ್ತ |
|---|---|---|---|---|---|
| 1 | ಶಿವಮೊಗ್ಗ | 451 | 296 | 101 | ಗ್ರಾಮೀಣ ಪ್ರದೇಶದ ಬಾಡಿಗೆ ಅಂಗನವಾಡಿ ಕಟ್ಟಡಗಳಿಗೆ ರೂ. 2000/- ಹಾಗೂ ನಗರ ಪ್ರದೇಶದ ಬಾಡಿಗೆ ಅಂಗನವಾಡಿ ಕಟ್ಟಡಗಳಿಗೆ ರೂ. 6000/- ಗಳನ್ನು ಮಾಸಿಕವಾಗಿ ಪಾವತಿಸಲಾಗುತ್ತಿದೆ. |
| 2 | ಸಾಗರ | 363 | 312 | 16 | |
| 3 | ಭದ್ರಾವತಿ | 405 | 301 | 80 | |
| 4 | ಹೊಸನಗರ | 346 | 290 | 26 | |
| 5 | ಶಿಕಾರಿಪುರ | 313 | 285 | 19 | |
| 6 | ಸೊರಬ | 384 | 314 | 46 | |
| 7 | ತೀರ್ಥಹಳ್ಳಿ | 301 | 264 | 7 | |
| ಒಟ್ಟು | | **2563** | **2062** | **295** | |